ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬ್ರಿಮ್ಸ್‌ನಲ್ಲಿ ಜರುಗಿದ ಅವ್ಯವಹಾರದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):-

508(707) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18ರಲ್ಲಿ ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ಜರುಗಿದ ಸುಮಾರು 18 ಕೋಟಿ ರೂಪಾಯಿಯ ಅವ್ಯವಹಾರದ ತನಿಖೆ ಮುಗಿದಿದೆಯೇ; ಇಲ್ಲದಿದ್ದಲ್ಲಿ, ಯಾವ ಹಂತದಲ್ಲಿದೆ;

(ಆ) ಈ ಅವ್ಯವಹಾರದಲ್ಲಿ ಭಾಗಿಯಾಗಿದ್ದಾರೆನ್ನಲಾದ ಸಿಬ್ಬಂದಿಗಳು ಎರವಲು ಸೇವೆ ಮೇಲೆ ಬಂದಿದ್ದು, ಈ ಮಹಾವಿದ್ಯಾಲಯದಲ್ಲಿಯೇ ಅವರುಗಳು ಮುಂದುವರೆಯಲು ಕಾರಣವೇನು; ಅವರುಗಳನ್ನು ಮಾತೃ ಇಲಾಖೆಗೆ ಕಳುಹಿಸದಿರಲು ಕಾರಣವೇನು;

(ಇ) ಈ ಅವ್ಯವಹಾರದಲ್ಲಿ ಭಾಗಿಯಾಗಿದ್ದಂತಹ ಮಾಜಿ ನಿರ್ದೇಶಕರು ಹಾಗೂ ಇತರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣವೇನು?